ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 295 (2179)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು : ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು

ವಿಷಯ : ರಾಜ್ಯದಲ್ಲಿರುವ ಕ್ರೀಡಾ ಇಲಾಖೆಯ ಕ್ರೀಡಾಂಗಣ ಹಾಗೂ ಸಿಬ್ಬಂದಿಯವರ ಬಗ್ಗೆ

(ಅ) ಕಳೆದ ಮೂರು ವರ್ಷದಲ್ಲಿ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಮೂಲಕ ಕ್ರೀಡೆಗಾಗಿ ಬಜೆಟ್‌ನಲ್ಲಿ ಮೀಸಲಿಡಲಾದ ಹಣ ಎಷ್ಟು; ಅದರಲ್ಲಿ ಖರ್ಚಾದ ಹಣ ಎಷ್ಟು;

(ಆ) ರಾಜ್ಯದಲ್ಲಿ ಎಷ್ಟು ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಲ್ಲಿ ಕ್ರೀಡಾಂಗಣಗಳನ್ನು ಸ್ಥಾಪನೆ ಮಾಡಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಪ್ರತಿ ತಾಲ್ಲೂಕು ಮತ್ತು ಜಿಲ್ಲಾ ಕ್ರೀಡಾಂಗಣಗಳಲ್ಲಿ ಎಷ್ಟು ತರಬೇತಿದಾರರು ಹಾಗೂ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ; ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯವರು ಏಜೆನ್ಸಿ/ಗುತ್ತಿಗೆ/ಅಥವಾ ಖಾಯಂ ಆಧಾರರಿತ ನೌಕರರೇ; (ವಿವರ ನೀಡುವುದು)

(ಈ) ತಾಲ್ಲೂಕು ಹಾಗೂ ಜಿಲ್ಲಾ ಕ್ರೀಡಾಂಗಣಗಳನ್ನು ನಿರ್ವಹಣೆ ಮಾಡಲು ಎಷ್ಟು ಅನುದಾನವನ್ನು ನೀಡಲಾಗುತ್ತಿದೆ; (ತಾಲ್ಲೂಕುವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಕಳೆದ ಮೂರು ವರ್ಷಗಳಿಂದ ವೈಯಕ್ತಿಕ ಪಂದ್ಯಾಟ ಹಾಗೂ ಗುಂಪು ಆಟಗಳಲ್ಲಿ ರಾಷ್ಟ್ರ-ಅಂತರ ರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದವರು ಮಾಡಿರುವ ಸಾಧನೆಗಳು ಏನು? (ವಿವರವಾದ ಮಾಹಿತಿ ನೀಡುವುದು)